# - ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"ಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಪ್ರಸ್ತಾವನೆ:**

ಮಾನ್ಯ ಮುಖ್ಯಮಂತ್ರಿಗಳು 2017-18ನೇ ಸಾಲಿನ ಆಯವ್ಯಯ ಕಂಡಿಕೆ 289ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ.

> **"ನಮ್ಮ ಗ್ರಾಮ ನಮ್ಮ ಯೋಜನೆ"ಗಾಗಿ 20ಕೋಟಿ ರೂಗಳನ್ನು ಒದಗಿಸಲಾಗುವುದು. ಗ್ರಾಮ ಪಂಚಾಯತಿಗಳಲ್ಲಿ ತಯಾರು ಮಾಡಿರುವ ಯೋಜನೆಗಳನ್ನು ಕ್ರೋಢೀಕರಿಸಿ ತಾಲ್ಲೂಕು ಮತ್ತು ಜಿಲ್ಲಾ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಲಾಗುವುದು. ಮುಂದಿನ ಐದು ವರ್ಷದ ಅವಧಿಗೆ ಗುರುತಿಸಲಾಗಿದ್ದ ಒಟ್ಟು 22.5 ಲಕ್ಷ ಚಟುವಟಿಕೆಗಳಲ್ಲಿ ಪ್ರಸಕ್ತ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ 3.9 ಲಕ್ಷ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು".**

2017-18ನೇ ಸಾಲಿನ ಹೊಸ ಯೋಜನೆಯಾದ 'ನಮ್ಮ ಗ್ರಾಮ ನಮ್ಮ ಯೋಜನೆ'ಗಾಗಿ ಅಯವ್ಯಯ ಲೆಕ್ಕ ಶೀರ್ಷಿಕೆ:2215-01-102-9-09(ಯೋಜನೆ) ರೂ.20.00 ಕೋಟಿಗಳನ್ನು ಒದಗಿಸಲಾಗಿದೆ. ಗ್ರಾಮ ಪಂಚಾಯತಿಗಳಲ್ಲಿ ತಯಾರು ಮಾಡಿರುವ ಯೋಜನೆಗಳನ್ನು ಕ್ರೋಢೀಕರಿಸಿ, ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಸಲ್ಲಿಸಬೇಕಾಗಿದೆ. ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯಡಿ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಗಳನ್ನು ಜಿಲ್ಲಾ ಅಭಿವೃದ್ಧಿ ಯೋಜನೆಗೆ ಸಲ್ಲಿಸಬೇಕಾಗಿದ್ದು, ಜಿಲ್ಲಾ ಯೋಜನಾ ಸಮಿತಿಯಿಂದ ಅನುಮೋದನೆಗೊಂಡ ಕ್ರಿಯಾ ಯೋಜನೆಯನ್ನು ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಸಲ್ಲಿಸಬೇಕಾಗಿರುತ್ತದೆ. ಈ ಎಲ್ಲಾ ಪ್ರಕ್ರಿಯೆಗಳನ್ನು ನಿರ್ವಹಿಸಲು 2017-18ನೇ ಸಾಲಿನ ಆಯವ್ಯಯದಲ್ಲಿ ರೂ.20.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುತ್ತದೆ.

"ನಮ್ಮ ಗ್ರಾಮ ನಮ್ಮ ಯೋಜನೆ"ಯಡಿ ಕೆಳ ಹಂತದಿಂದ ಯೋಜನಾ ತಯಾರಿಕಾ ಪ್ರಕ್ರಿಯೆಯನ್ನು ಸದೃಡಗೊಳಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ಕ್ರಮವಹಿಸಲಾಗುತ್ತದೆ.

ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ, 310 ಬಿ ರನ್ವಯ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ರಚಿಸಲಾಗಿದ್ದು, ಇದರ ಕಾರ್ಯಚಟುವಟಿಕೆಗಳಿಗಾಗಿ ರೂ.5.00 ಕೋಟಿಗಳನ್ನು ಮೀಸಲಿರಿಸಲು ಉದ್ದೇಶಿಸಿದೆ. ಇದರಲ್ಲಿ ಸಮಿತಿಯ ಆಡಳಿತಾತ್ಮಕ ವೆಚ್ಚ, ತಾಂತ್ರಿಕ ಸಿಬ್ಬಂದಿ ವೇತನ, ಪ್ರಯಾಣ ವೆಚ್ಚ, ದೂರವಾಣಿ ಮತ್ತು ಸಾದಿಲ್ವಾರು ವೆಚ್ಚ, ಅಧ್ಯಯನ ಪ್ರವಾಸ ಹಾಗೂ ಕಾರ್ಯಗಾರಗಳ ವೆಚ್ಚಗಳು ಹಾಗೂ ಇತರ ವೆಚ್ಚಗಳನ್ನು ಅಳವಡಿಸಿದೆ.

a) ಕರ್ನಾಟಕ ರಾಜ್ಯದಲ್ಲಿ ಕೆಳ ಹಂತದ ಯೋಜನಾ ತಯಾರಿಕ ಪ್ರಕ್ರಿಯೆಯನ್ನು ಬಲಪಡಿಸುವ ದೃಷ್ಟಿಯಿಂದ "ನಮ್ಮ ಗ್ರಾಮ ನಮ್ಮ ಯೋಜನೆಯನ್ನು ಸಿದ್ಧಪಡಿಸಲು 2016-17ನೇ ಸಾಲಿನಲ್ಲಿ ಕ್ರಮವಹಿಸಿದ್ದು, ರಾಜ್ಯದ 6022 ಗ್ರಾಮ ಪಂಚಾಯತಿ ಯೋಜನೆಗಳು ರೂಪಿತಗೊಂಡಿದೆ. ಸರ್ಕಾರವು ನಿಗಧಿಪಡಿಸಿದ ಪ್ರಕ್ರಿಯೆ ಹಾಗೂ ಗ್ರಾಮ ಪಂಚಾಯತಿ ಪ್ರದೇಶದಲ್ಲಿ ಕಂಡುಬಂದ ಕೊರತೆಗಳಿಗೆ ಪೂರಕವಾಗಿ ಸಿದ್ಧಪಡಿಸಿರುವ ಯೋಜನೆಗಳಿಗೆ ತಲಾ ರೂ.10.00ಲಕ್ಷಗಳಂತೆ ಅನುಬಂಧದಲ್ಲಿರುವ ಒಟ್ಟು 100 ಗ್ರಾಮ ಪಂಚಾಯತಿಗಳಿಗೆ ರೂ.10.00 ಕೋಟಿ ಪ್ರೋತ್ಸಾಹಧನ ನೀಡಲು ಉದ್ದೇಶಿಸಿದೆ. ಇದನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅಧ್ಯಕ್ಷತೆಯಲ್ಲಿ ನಿರ್ಧರಿಸಲಾಗುವ ಸಮಿತಿಯ ಮಾನ ದಂಡಗಳ ಮೂಲಕ ಪ್ರಸ್ತಾವನೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಲು ಉದ್ದೇಶಿಸಿದೆ.

b) ಕರ್ನಾಟಕ ರಾಜ್ಯದ 6022 ಗ್ರಾಮ ಪಂಚಾಯತಿಗಳಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"ಯಡಿ ಯೋಜನೆಗಳನ್ನು ಸಿದ್ಧಪಡಿಸಲಾಗಿದೆ. ಸದರಿ ಯೋಜನೆಗಳಲ್ಲಿ ಕೇಂದ್ರ ವಲಯ, ರಾಜ್ಯ ವಲಯ ಮತ್ತು ಜಿಲ್ಲಾ ವಲಯದ ಇತರೆ ಇಲಾಖೆಗಳ ಚಟುವಟಿಕೆಗಳನ್ನು ಕ್ರೋಢೀಕರಿಸಿ ಸಮಗ್ರ ಯೋಜನೆಯನ್ನು ರೂಪಿಸುವ ಅವಶ್ಯಕತೆ ಇದೆ. ಇದೇ ರೀತಿ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳ ಯೋಜನೆಗಳನ್ನು ಕ್ರೋಢೀಕರಿಸಿ ತಾಲ್ಲೂಕು ಯೋಜನೆಗಳನ್ನು ಹಾಗೂ ಜಿಲ್ಲೆಯ ಎಲ್ಲಾ ಯೋಜನೆಗಳನ್ನು ಕ್ರೋಢೀಕರಿಸಿ ಸಮಗ್ರ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸಬೇಕಿದೆ. ಕೆಳಹಂತದಿಂದ ಬೇಡಿಕೆಗಳಿಗನುಸಾರವಾಗಿ ಯೋಜನೆ ಸಿದ್ಧಪಡಿಸಲಾಗುತ್ತಿದೆ. ಇದೇ ಪ್ರಕ್ರಿಯೆಯನ್ನು ಬಲಪಡಿಸುವ ಸಲುವಾಗಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಜಿಲ್ಲಾ ಯೋಜನಾ ಸಮಿತಿಯ ವಿವಿಧ ಪಂಚಾಯತ್ ರಾಜ್ಯಗಳ ಚುನಾಯಿತ ಸದಸ್ಯರು ಮತ್ತು ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

**ಪ್ರಸ್ತುತ ಸಾಲಿಗೆ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ.**

1. ರಾಜ್ಯ ಮಟ್ಟದಲ್ಲಿ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ಸದೃಡಗೊಳಿಸುವುದು- ಅಂದಾಜು ವೆಚ್ಚ ರೂ.5 ಕೋಟಿಗಳು.
2. ರಾಜ್ಯದಲ್ಲಿ ಉತ್ತಮ ರೀತಿಯ ಮಾದರಿ "ನಮ್ಮ ಗ್ರಾಮ ನಮ್ಮ ಯೋಜನೆ"ಯನ್ನು ಸಿದ್ಧಪಡಿಸುವ ಗ್ರಾಮ ಪಂಚಾಯತ್‌ಗಳಿಗೆ ತಲಾ ರೂ.10 ಲಕ್ಷಗಳ ಪ್ರೋತ್ಸಾಹ ಧನ ನೀಡುವುದು- ಅಂದಾಜು ವೆಚ್ಚ ರೂ.10 ಕೋಟಿ.
3. ಪ್ರಾಯೋಗಿಕವಾಗಿ ಮೈಸೂರು ಮತ್ತು ಗದಗ ಜಿಲ್ಲೆಯಲ್ಲಿ ವಿಕೇಂದ್ರಿಕರಣ ಯೋಜನಾ ಪ್ರಕ್ರಿಯೆಯನ್ನು ಸಶಕ್ತಗೊಳಿಸುವ ಕಾರ್ಯಕ್ರಮಗಳ- ತಲಾ ಅಂದಾಜು ವೆಚ್ಚ ರೂ.2.5 ಕೋಟಿಗಳು ಒಟ್ಟು ರೂ.5.00 ಕೋಟಿಗಳು.

ಒಟ್ಟಾರೆ ಪ್ರಸಕ್ತ ಸಾಲಿನಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆಯನ್ನು" ಅನುಷ್ಠಾನಗೊಳಿಸಲು ರೂ.20.00 ಕೋಟಿಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 159 ಜಿಪಸ 2017, ಬೆಂಗಳೂರು, ದಿನಾಂಕ:12-07-2017.**

1. ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ರಾಜ್ಯದಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ" ಕಾರ್ಯಕ್ರಮಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿದೆ. 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ:2215-01-102-9-09(ಯೋಜನೆ) (059 ಇತರೆ ಖರ್ಚುಗಳು) ಅಡಿಯಲ್ಲಿ ಲಭ್ಯವಿರುವ ರೂ.20.00 (ಇಪತ್ತು ಕೋಟಿಗಳು ಮಾತ್ರ) ಕೋಟಿಗಳನ್ನು ಈ ಕೆಳಕಾಣಿಸಿದ ಕಾರ್ಯಚಟುವಟಿಕೆಗಳಿಗೆ ಹಂಚಿಕೆ ಮಾಡಿಕೊಳ್ಳಲು ಆದೇಶಿಸಿದೆ.

2. ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯಲ್ಲಿ ವಿಕೇಂದ್ರಿಕರಣ ಯೋಜನಾ ಪ್ರಕ್ರಿಯೆಯನ್ನು ಸಶಕ್ತಗೊಳಿಸುವ ಕಾರ್ಯಕ್ರಮಗಳು- ಅಂದಾಜು ವೆಚ್ಚ ರೂ.2.5 ಕೋಟಿಗಳು ಹಾಗೂ ಪ್ರಾಯೋಗಿಕವಾಗಿ ಗದಗ ಜಿಲ್ಲೆಯಲ್ಲಿ ವಿಕೇಂದ್ರಿಕರಣ ಯೋಜನಾ ಪ್ರಕ್ರಿಯೆಯನ್ನು ಸಶಕ್ತಗೊಳಿಸುವ ಕಾರ್ಯಕ್ರಮಗಳು ಅಂದಾಜು ವೆಚ್ಚ ರೂ.2.5 ಕೋಟಿಗಳು ಒಟ್ಟಾರೆ ರೂ.5.00ಕೋಟಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಮೈಸೂರು ಹಾಗೂ ಗದಗ ಇವರಿಗೆ ಬಿಡುಗಡೆಗೊಳಿಸಲು ಆದೇಶಿಸಿದೆ. ಈ 2 ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಅನುದಾನವನ್ನು ಬಿಡುಗಡೆ ಮಾಡುವ ಮೊದಲು ಸದರಿ ಕಾರ್ಯಕ್ರಮವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಮಾರ್ಗದರ್ಶನ ಹಾಗೂ ಸಹಕಾರದೊಂದಿಗೆ ನಿರ್ವಹಿಸಿ ಅದರ ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಸದರಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದೆ.

3. ರಾಜ್ಯದಲ್ಲಿ ಉನ್ನತ ರೀತಿಯ ಮಾದರಿ "ನಮ್ಮ ಗ್ರಾಮ ನಮ್ಮ ಯೋಜನೆ"ಯನ್ನು ಸಿದ್ದಪಡಿಸುವ ಗ್ರಾಮ ಪಂಚಾಯತಿಗಳಿಗೆ ತಲಾ ರೂ.10 ಲಕ್ಷಗಳ ಪ್ರೋತ್ಸಾಹಧನ ನೀಡಲು ಒಟ್ಟು ರೂ.10.00 ಕೋಟಿಗಳನ್ನು ಬಹುಮಾನ ಘೋಷಿಸಿದ ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮೂಲಕ /ನೇರವಾಗಿ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲು ಆದೇಶಿಸಿದೆ.

4. ರಾಜ್ಯ ಮಟ್ಟದಲ್ಲಿ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ಸದೃಢಗೊಳಿಸುವುದು ಅಂದಾಜು ಮೊತ್ತ ವೆಚ್ಚ ರೂ.5.00ಕೋಟಿಗಳು.

5. ಈ ಅನುದಾನವನ್ನು ಲೆಕ್ಕ ಶೀರ್ಷಿಕೆ:2215-01-102-9-09(ಯೋಜನೆ)(059 ಇತರೆ ಖರ್ಚುಗಳು) ಅಡಿಯಲ್ಲಿ ಭರಿಸಲು ಮಂಜೂರಾತಿ ನೀಡಲಾಗಿದೆ.

6. ಪ್ರಸ್ತಾಪಿತ ಕಾರ್ಯಗಾರ ಹಾಗೂ ಮುಂತಾದ ಸಂಬಂಧಿತ ಕಾರ್ಯಕ್ರಮಗಳಲ್ಲಿ ಯೋಜನಾ ಇಲಾಖೆಯ ಅಧಿಕಾರಿಗಳನ್ನು ಸಹ ತರಬೇತಿಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಳ್ಳಲು ಆದೇಶಿಸಿದೆ.

7. "ನಮ್ಮ ಗ್ರಾಮ ನಮ್ಮ ಯೋಜನೆ" ಕಾರ್ಯಕ್ರಮದ ಆಯಾಯ ವರ್ಷದ ಕ್ರಿಯಾ ಯೋಜನೆಗಳಲ್ಲಿನ ಪ್ರಸ್ತಾಪಿತ ಕಾರ್ಯಕ್ರಮಗಳಿಗೆ ಸಕ್ಷಮ ಪ್ರಾಧಿಕಾರದಿಂದ ಅಂದಾಜು ಪಟ್ಟಿಯನ್ನು ತಯಾರಿಸಿ, ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ ಪಡೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ(ಕೆ.ಟಿ.ಟಿ.ಪಿ) ಅಧಿನಿಯಮ, 1999 ಹಾಗೂ ನಿಯಮಗಳು, 2000 ಮತ್ತು ಇತ್ತೀಚಿನ ನಿಯಮಗಳನ್ನು ಅನುಸರಿಸಿ ಅನುಷ್ಠಾನಿಸಲು ಸದರಿ ಕಾರ್ಯಕ್ರಮಗಳನ್ನು ಗಾಂಧೀ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಲು ಆದೇಶಿಸಿದೆ.

8. ಈ ಯೋಜನೆಯನ್ನು ಈ ಕೆಳಕಾಣಿಸಿದ ದಿನಾಂಕದೊಳಗೆ ಜಾರಿಗೊಳಿಸಲು ಈಗಾಗಲೇ ದಿನಾಂಕ: 17-04-2017ರ ಸುತ್ತೋಲೆ ಮತ್ತು 30-05-2017ರ ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ "ನಮ್ಮ ಗ್ರಾಮ ನಮ್ಮ ಯೋಜನೆ"ಯ ರಾಜ್ಯ ಮಟ್ಟದ ಉನ್ನತಾಧಿಕಾರ ಸಮಿತಿ ಸಭೆಯ ನಡವಳಿಯಲ್ಲಿ ಸೂಚಿಸಿದಂತೆ ಜಾರಿಗೊಳಿಸತಕ್ಕದ್ದು.

| | | |
|---|---|---|
| 1. | ಗ್ರಾಮ ಸಭೆಗಳ ಆಯೋಜಿಸುವುದು ಹಾಗೂ 2018-19ನೇ ಸಾಲಿನ ಕ್ರಿಯಾ ಯೋಜನೆಯನ್ನು ಆದ್ಯತಾ ರ್‍ಯಾಕಿಂಗ್ ಮೇರೆಗೆ ಸಿದ್ಧಪಡಿಸುವುದು ಮತ್ತು ಗ್ರಾಮ ಪಂಚಾಯತಿಗಳಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗಳಿಗೆ ಅನುಮೋದನೆ ಪಡೆಯುವುದು. | 27-6-2017 ರಿಂದ 27-07-2017ರ ವರೆಗೆ |
| 2. | ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳಿಂದ ಅನುಮೋದನೆ ಪಡೆಯುವುದು. | 27-07-2017 ರಿಂದ 27-08-2017ರ ವರೆಗೆ |
| 3. | ಜಿಲ್ಲಾ ಯೋಜನಾ ಸಮಿತಿಗಳಿಂದ ಅನುಮೋದನೆ ಪಡೆಯುವುದು. | 27-08-2017 ರಿಂದ 30-09-2017ರ ವರೆಗೆ |
| 4. | ಯೋಜನೆ ಇಲಾಖೆ ಮೂಲಕ ಕರ್ನಾಟಕ ರಾಜ್ಯ ವಿಕೇಂದ್ರೀಕೃತ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯಿಂದ ಅನುಮೋದನೆ ಪಡೆಯುವುದು. | 01-10-2017 ರಿಂದ 31-10-2017ರ ವರೆಗೆ |
| 5. | ರಾಜ್ಯದ ಸಮಗ್ರ ಯೋಜನೆಯ ಅಂದಾಜುಗಳನ್ನು ಯೋಜನಾ ಮತ್ತು ಸಾಂಖ್ಯಿಕ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಕಳುಹಿಸಿಕೊಡುವುದು. | 2017ರ ನವೆಂಬರ್ 2ನೇ ವಾರದೊಳಗೆ |

9. ಈ ಯೋಜನಾ ಎಲ್ಲಾ ಪ್ರಕ್ರಿಯೆಗಳನ್ನು ನಿರ್ವಹಿಸುವ ಹಾಗೂ ಉಸ್ತುವಾರಿ ಮಾಡುವ ಸಂಪೂರ್ಣ ಜವಾಬ್ದಾರಿಯನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಿಕೊಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ/306/ವೆಚ್ಚ-6/2017 ದಿನಾಂಕ:16-05-2017 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ 26 ಜಿಯೋವಿ 2017, ದಿನಾಂಕ:18-05-2017 ರಲ್ಲಿ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

PDevasahayam 12/7/2017
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

12.7.17

**ಇವರಿಗೆ:**

1. ಮಹಾಲೇಖಪಾಲರು, (ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ) ಕರ್ನಾಟಕ, ಬೆಂಗಳೂರು.
2. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ).
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ, ಮೈಸೂರು.
8. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ ಜಿಲ್ಲೆ, ಗದಗ.
9. ನಿರ್ದೇಶಕರು, ಜಿಲ್ಲಾ ಯೋಜನಾ ವಿಭಾಗ, ಯೋಜನಾ ಇಲಾಖೆ.
10. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6) ಹಾಗೂ ಬಜೆಟ್ ವಿಭಾಗ.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್
13. ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ.
14. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
15. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.

## ಅನುಬಂಧ-1

| ಕ್ರಸಂ | ಜಿಲ್ಲೆಯ ಹೆಸರು | ಗ್ರಾಮ ಪಂಚಾಯತಿಗಳ ಸಂಖ್ಯೆ | ಉತ್ತಮವಾಗಿ ನಮ್ಮ ಗ್ರಾಮ ನಮ್ಮ ಯೋಜನೆಯನ್ನು ತಯಾರಿಸಿದ ಗ್ರಾಮ ಪಂಚಾಯತಿಗಳಿಗೆ ಪ್ರೋತ್ಸಾಹಧನವನ್ನು ನೀಡಬೇಕಾಗಿರುವ ವಿವರ |
|---|---|---|---|
| 1 | ಬಾಗಲಕೋಟೆ | 198 | 4 |
| 2 | ಬೆಂಗಳೂರು (ನ) | 96 | 2 |
| 3 | ಬೆಂಗಳೂರು (ಗ್ರಾ) | 105 | 2 |
| 4 | ಬೆಳಗಾವಿ | 505 | 10 |
| 5 | ಬಳ್ಳಾರಿ | 200 | 4 |
| 6 | ಬೀದರ್ | 186 | 2 |
| 7 | ವಿಜಯಪುರ | 213 | 4 |
| 8 | ಚಾಮರಾಜನಗರ | 130 | 2 |
| 9 | ಚಿಕ್ಕಬಳ್ಳಾಪುರ | 157 | 2 |
| 10 | ಚಿಕ್ಕಮಗಳೂರು | 227 | 4 |
| 11 | ಚಿತ್ರದುರ್ಗ | 189 | 4 |
| 12 | ದಕ್ಷಿಣ ಕನ್ನಡ | 230 | 4 |
| 13 | ದಾವಣಗೆರೆ | 233 | 4 |
| 14 | ಧಾರವಾಡ | 144 | 2 |
| 15 | ಗದಗ | 122 | 2 |
| 16 | ಕಲಬುರಗಿ | 264 | 4 |
| 17 | ಹಾಸನ | 267 | 4 |
| 18 | ಹಾವೇರಿ | 224 | 4 |
| 19 | ಕೊಡಗು | 104 | 2 |
| 20 | ಕೋಲಾರ | 156 | 2 |
| 21 | ಕೊಪ್ಪಳ | 153 | 2 |
| 22 | ಮಂಡ್ಯ | 234 | 4 |
| 23 | ಮೈಸೂರು | 266 | 4 |
| 24 | ರಾಯಚೂರು | 180 | 2 |
| 25 | ರಾಮನಗರ | 127 | 2 |
| 26 | ಶಿವಮೊಗ್ಗ | 271 | 4 |
| 27 | ತುಮಕೂರು | 331 | 6 |
| 28 | ಉಡುಪಿ | 158 | 2 |
| 29 | ಉತ್ತರ ಕನ್ನಡ | 231 | 4 |
| 30 | ಯಾದಗಿರಿ | 123 | 2 |
| ಒಟ್ಟು | | **6024** | **100** |

P Dhudalg 12/7/2017

## ಪ್ರಸ್ತಾಪಿತ ಚಟುವಟಿಕೆಗಳ ವಿವರ

**1. ಗದಗ ಮತ್ತು ಮೈಸೂರು ಜಿಲ್ಲೆಗಳಲ್ಲಿ ಮೊದಲ ಹಂತದಲ್ಲಿ ವಿಕೇಂದ್ರೀಕರಣ ಯೋಜನಾ ಪ್ರಕ್ರಿಯೆ ಬಲಪಡಿಸುವಿಕೆ.**

ನಮ್ಮ ಗ್ರಾಮ ನಮ್ಮ ಯೋಜನೆಯಡಿಯಲ್ಲಿ ವಿಕೇಂದ್ರೀಕರಣ ಯೋಜನಾ ಪ್ರಕ್ರಿಯೆ ಬಲಪಡಿಸುವ ಬಗ್ಗೆ ರಾಜ್ಯದಲ್ಲಿ ಚಾಲನೆ ನೀಡುವ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. 2016–17ನೇ ಸಾಲಿನಲ್ಲಿ ಏರ್ಪಡಿಸಿದ ವಾರ್ಡ್ ಸಭಾ ಹಾಗೂ ಗ್ರಾಮ ಸಭಾ ಮತ್ತು ಸಮುದಾಯ ಆಧಾರಿತ ವರ್ಗೀಕರಣ ಹಾಗೂ ಚಟುವಟಿಕೆಗಳ ಗುರುತಿಸುವಿಕೆಯ ಆಧ್ಯತೆಯ ಮೇರೆಗೆ ಪ್ರಾಥಮಿಕ ಹಂತದ ಚಟುವಟಿಕೆಗಳು ಯಶಸ್ವಿಯಾಗಿರುತ್ತದೆ. ಕೆಳಹಂತದ ಯೋಜನಾ ಪ್ರಕ್ರಿಯೆ ಬಲಪಡಿಸುವ ಅವಶ್ಯಕತೆ ಇದ್ದು, ರಾಜ್ಯದ 2 ಜಿಲ್ಲೆಗಳಾದ ಮೈಸೂರು ಮತ್ತು ಗದಗನ್ನು ಆಯ್ದುಕೊಳ್ಳಲಾಗಿದೆ. ಈ ಪ್ರಕ್ರಿಯೆಯಲ್ಲಿ ಅವಶ್ಯವಿರುವ ಸವಿಸ್ತಾರವಾದ ಚಟುವಟಿಕೆಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.

- ವಿಕೇಂದ್ರೀಕರಣ ಯೋಜನಾ ಪ್ರಕ್ರಿಯೆ ಬಗ್ಗೆ ಗ್ರಾಮ ಪಂಚಾಯತಿ ಹಂತದಲ್ಲಿ ಪಾಲುದಾರರಿಗೆ ಜಾಗೃತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
- ಸಾಮಾರ್ಥ್ಯಾಭಿವೃದ್ಧಿ ತರಬೇತಿಯನ್ನು ಎಲ್ಲಾ ಗ್ರಾಮ ಪಂಚಾಯತಿಗಳಿಗೆ ವಿಸ್ತರಿಸಬಹುದು.
- ಗ್ರಾಮ ಸಭೆಯಲ್ಲಿ ಪ್ರಸ್ತಾಪಿಸಿರುವ ಚಟುವಟಿಕೆಗಳನ್ನು ಕ್ರೋಢೀಕರಿಸುವುದು.
- ಗ್ರಾಮ ಸಭೆಯಲ್ಲಿ ಪ್ರಸ್ತಾಪಿಸಿರುವ ಚಟುವಟಿಕೆಗಳನ್ನು ವಿಶ್ಲೇಷಣೆ ಹಾಗೂ ವರ್ಗವಾರು ಹಂಚಿಕೆ ಮಾಡುವುದು.
- ಗ್ರಾಮ ಪಂಚಾಯತಿ ಯೋಜನೆಗಳನ್ನು ಅಂತಿಮಗೊಳಿಸುವುದು ಮತ್ತು ಅನುಮೋದಿಸುವುದು.
- ತಾಲ್ಲೂಕು ಹಂತದಲ್ಲಿ ತೆಗೆದುಕೊಳ್ಳಬೇಕಾದ ಗ್ರಾಮಸಭೆಯ ಅಪೇಕ್ಷೆಯ ಚಟುವಟಿಕೆಗಳು/ ಯೋಜನೆಗಳನ್ನು ತಾಲ್ಲೂಕು ಪಂಚಾಯತಿಗೆ ವರ್ಗಾಯಿಸುವುದು.
- ತಾಲ್ಲೂಕು ಹಂತದ ಯೋಜನೆಗಳು/ಚಟುವಟಿಕೆಗಳು/ಗ್ರಾಮ ಸಭಾ ಅಪೇಕ್ಷೆಯ ಯೋಜನೆಗಳನ್ನು ಕ್ರೋಢೀಕರಿಸುವುದು.
- ತಾಲ್ಲೂಕು ಹಂತದ ಗ್ರಾಮ ಪಂಚಾಯತಿ ಯೋಜನೆಗಳನ್ನು ಕ್ರೋಢೀಕರಿಸುವುದು.
- ತಾಲ್ಲೂಕು ಮುನ್ನೋಟ ತಯಾರಿಕೆಗೆ ತಾಲ್ಲೂಕು ಹಂತದ ಚುನಾಯಿತ ಪ್ರತಿನಿಧಿಗಳಿಗೆ ಹಾಗೂ ಅಧಿಕಾರಿಗಳಿಗೆ ಸಾಮಾರ್ಥ್ಯಾಭಿವೃದ್ಧಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು.
- ಇಲಾಖಾವಾರು ಚಟುವಟಿಕೆಗಳನ್ನು ತಾಲ್ಲೂಕು ಹಂತದಲ್ಲಿ ಯೋಜಿಸುವುದು.
- ತಾಲ್ಲೂಕು ಯೋಜನಾ ತಯಾರಿಕೆಗೆ ತಾಲ್ಲೂಕು ಯೋಜನಾ ಮತ್ತು ಅಭಿವೃದ್ಧಿ ಸಮಿತಿ ಸದಸ್ಯರಿಗೆ ಸಾಮಾರ್ಥ್ಯಾಭಿವೃದ್ಧಿ ತರಬೇತಿ ನೀಡುವುದು.
- ತಾಲ್ಲೂಕು ಯೋಜನೆಗಳನ್ನು ತಯಾರಿಸುವುದು.
- ಜಿಲ್ಲಾ ಹಂತದಲ್ಲಿ ತೆಗೆದುಕೊಳ್ಳಬೇಕಾದ ಗ್ರಾಮ ಸಭೆಯ ಅಪೇಕ್ಷೆಯ ಚಟುವಟಿಕೆಗಳು/ಯೋಜನೆಗಳನ್ನು ಜಿಲ್ಲಾ ಪಂಚಾಯತಿಗೆ ವರ್ಗಾಯಿಸುವುದು.
- ತಾಲ್ಲೂಕು ಯೋಜನೆಗಳನ್ನು ಜಿಲ್ಲಾ ಹಂತದಲ್ಲಿ ಕ್ರೋಢೀಕರಿಸುವುದು.
- ಜಿಲ್ಲಾ ಮುನ್ನೋಟ ತಯಾರಿಕೆಗೆ ಚುನಾಯಿತ ಪ್ರತಿನಿಧಿಗಳು ಮತ್ತು ಜಿಲ್ಲಾ ಮುನ್ನೋಟ ತಯಾರಿಕೆಯಲ್ಲಿ ಜಿಲ್ಲಾ ಹಂತದ ಚುನಾಯಿತ ಪ್ರತಿನಿಧಿಗಳಿಗೆ ಮತ್ತು ಅಧಿಕಾರಿಗಳಿಗೆ ಸಾಮಾರ್ಥ್ಯಾಭಿವೃದ್ಧಿ ತರಬೇತಿ ನೀಡುವುದು.
- ಇಲಾಖಾವಾರು ಚಟುವಟಿಕೆಗಳನ್ನು ಜಿಲ್ಲಾ ಹಂತದಲ್ಲಿ ಯೋಜಿಸುವುದು.
- ಜಿಲ್ಲಾ ಯೋಜನಾ ತಯಾರಿಕೆಗೆ ಜಿಲ್ಲಾ ಯೋಜನಾ ಸಮಿತಿ ಸದಸ್ಯರಿಗೆ ಸಾಮಾರ್ಥ್ಯಾಭಿವೃದ್ಧಿ ತರಬೇತಿ ನೀಡುವುದು.
- ಜಿಲ್ಲಾ ಯೋಜನಾ ತಯಾರಿಕೆ.

P Dwasaly 12/7/2017